ಕರ್ನಾಟಕ ಸರ್ಕಾರ

ಸಂಖ್ಯೆ•ಸಕಇ 25 ಬಿಸಿಎ 2002

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ 23-3-2002.

## ಸುತ್ತೋಲೆ

ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೇ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ 1997ರ ಪರಿಚ್ಛೇದ 4(ಎ) ಮೇರೆಗೆ ತಾಲ್ಲೂಕು ತಹಶೀಲ್ದಾರ್ ರವರಿಗೆ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆಯೇ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೇ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ನಿಯಮಗಳು, 1992ರ ನಿಯಮ 3(ಸಿ)ಯ ಅಡಿಯಲ್ಲಿ ಪರಿಚ್ಛೇದ 4(ಎ) ಮೇರೆಗೆ ಹೊರಡಿಸಿದ ಜಾತಿ ಪ್ರಮಾಣ ಪತ್ರಗಳು ರದ್ದು ಮಾಡುವವರೆಗೆ ಚಾಲ್ತಿಯಲ್ಲಿರುವುದೆಂದು ಸ್ಪಷ್ಟಪಡಿಸಲಾಗಿದೆ. ಅಂತೆಯೇ ಪರಿಚ್ಛೇದ 4(ಎ) ಮೇರೆಗೆ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡಗಳು ಹಾಗೂ ಹಿಂದುಳಿದ ವರ್ಗಗಳ ಜಾತಿಗಳಿಗೆ ನೀಡಿದ ಜಾತಿ ಪ್ರಮಾಣ ಪತ್ರಗಳು ಅವುಗಳನ್ನು ರದ್ದು ಮಾಡುವವರೆಗೆ ಚಾಲ್ತಿಯಲ್ಲಿರುವವು. ಅದರಂತೆಯೇ ನಿಯಮ 5(ಎ)ರ ಮೇರೆಗೆ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡಗಳಿಗೆ ಮತ್ತು ಪ್ರವರ್ಗ-1ಕ್ಕೆ ನೀಡಿದ ಸಿಂಧುತ್ವ ಪ್ರಮಾಣ ಪತ್ರಗಳೂ ಸಹ ಅವುಗಳನ್ನು ರದ್ದು ಮಾಡುವವರೆಗೆ ಚಾಲ್ತಿಯಲ್ಲಿರುವವು. ಇದಲ್ಲದೆ, ಸರ್ಕಾರದ ಅಧಿಸೂಚನೆ ಸಂ•ಸಕಇ 3 ಎಸ್‌ಟಿಸಿ 2002, ದಿನಾಂಕ 11-3-2002ರಂತೆ 4(ಎ)(2)ರ ಅಡಿಯಲ್ಲಿ ನೀಡುವ ಆದಾಯ:ಜಾತಿ ಪ್ರಮಾಣ ಪತ್ರಗಳು ಐದು ವರ್ಷಗಳ ಅವಧಿಗೆ ಜಾರಿಯಲ್ಲಿರುವವು ಎಂದು ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಜಾರಿಯಲ್ಲಿರುವ ಕೆನೆಪದರ ನೀತಿ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡಗಳು ಮತ್ತು ಹಿಂದುಳಿದ ವರ್ಗಗಳ ಪ್ರವರ್ಗ-1ರ ಅಡಿಯಲ್ಲಿ ಬರುವ ಜಾತಿಗಳಿಗೆ ಅನ್ವಯಿಸುವುದಿಲ್ಲ. ಮೇಲ್ಕಂಡ ಅಧಿಸೂಚನೆ ದಿನಾಂಕ 11-3-2002ರಲ್ಲಿ ತಿದ್ದುಪಡಿ ಮಾಡಿದಂತೆ ನಿಯಮ 5(ಎ) ಮೇರೆಗೆ ಈಗ ಶಿಕ್ಷಣ ಸಂಸ್ಥೆಗಳಲ್ಲಿ ಅಭ್ಯಾಸ ಕ್ರಮಗಳಿಗೆ ಪ್ರವೇಶ ಪಡೆಯುವಾಗ ಸಿಂಧುತ್ವ ಪ್ರಮಾಣ ಪತ್ರ ಸಲ್ಲಿಸುವ ಅವಶ್ಯಕತೆಯನ್ನು ತೆಗೆದುಹಾಕಲಾಗಿದೆ.

ಅಧಿನಿಯಮದಲ್ಲಿ ಹಾಗೂ ನಿಯಮಗಳಲ್ಲಿ ಮೇಲೆ ತಿಳಿಸಿದಂತೆ ಅವಕಾಶ ಕಲ್ಪಿಸಲಾಗಿದ್ದರೂ ಹಲವಾರು ಪ್ರಾಧಿಕಾರಗಳು ಹಾಗೂ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರುಗಳು ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ಕೊಡುವ ಸಮಯದಲ್ಲಿ ಪ್ರತಿಸಲವೂ ಇತ್ತೀಚೆಗೆ ಹೊರಡಿಸಿದ ಜಾತಿ ಪ್ರಮಾಣ ಪತ್ರಗಳನ್ನು ಒದಗಿಸಬೇಕೆಂದು ಒತ್ತಾಯಪಡಿಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ. ಇದರಿಂದಾಗಿ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡಗಳು ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪ್ರವೇಶಾವಕಾಶ ಪಡೆಯುವ ಸಂದರ್ಭದಲ್ಲಿ ಪ್ರತಿಸಲವೂ ಹೊಸದಾಗಿ ಪ್ರಮಾಣ ಪತ್ರ:ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಲು ತುಂಬಾ ತೊಂದರೆಯಾಗುತ್ತಿತ್ತು. ಈ ತೊಂದರೆಗಳನ್ನು ನಿವಾರಿಸಿ ಪ್ರಕ್ರಿಯೆಯನ್ನು ಸರಳೀಕರಿಸಲು ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಅಧಿಸೂಚನೆ ದಿನಾಂಕ 11-3-2002ರ ಪ್ರತಿಯನ್ನು ಮಾಹಿತಿಗಾಗಿ ಈ ಸುತ್ತೋಲೆಗೆ ಲಗತ್ತಿಸಿದೆ.

ಆದುದರಿಂದ, ವಿದ್ಯಾರ್ಥಿಗಳಿಗೆ ಪ್ರತಿಸಲವೂ ಹೊಸದಾಗಿ ಪ್ರಮಾಣ ಪತ್ರಗಳನ್ನು ಒದಗಿಸಲು ಒತ್ತಾಯಪಡಿಸಬಾರದೆಂದು ಎಲ್ಲಾ ಶಿಕ್ಷಣ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ. ವಿದ್ಯಾರ್ಥಿಗಳು ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆದ ನಂತರ ಅವರುಗಳ ಮೂಲ ಜಾತಿ ಪ್ರಮಾಣ ಪತ್ರ ತಕ್ಷಣವೇ ಹಿಂದಿರುಗಿಸಬೇಕೆಂದು ಹಾಗೂ ಪರಿಶೀಲನೆಗಾಗಿ ಪ್ರಮಾಣೀಕರಿಸಿದ ಜೆರಾಕ್ಸ್ ಪ್ರತಿಯನ್ನು ಇರಿಸಿಕೊಳ್ಳಬೇಕೆಂದು ಸೂಚನೆ ನೀಡಲಾಗಿದೆ. ಸೂಚನೆಗಳನ್ನು

ಉಲ್ಲಂಘಿಸುವುದರಿಂದ ಸರ್ಕಾರವು ಒದಗಿಸಿದ ಸೌಲಭ್ಯದಿಂದ ಸಾರ್ವಜನಿಕರು ವಿನಾಕಾರಣ ವಂಚಿತರಾಗುವರು. ಆದುದರಿಂದ ಈ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದೆಂದು ಎಲ್ಲಾ ಶೈಕ್ಷಣಿಕ ಸಂಸ್ಥೆಗಳಿಗೆ ಈ ಬಗ್ಗೆ ಸೂಕ್ತ ತಿಳುವಳಿಕೆ ನೀಡಬೇಕೆಂದು ಜಿಲ್ಲಾ ಶಿಕ್ಷಣ ಅಧಿಕಾರಿಗಳಿಗೆ, ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಅಧಿಕಾರಿಗಳಿಗೆ ಮತ್ತು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಈ ಮೂಲಕ ನಿರ್ದೇಶಿಸಲಾಗಿದೆ.

(ಸಹಿ)
(ಡಿ.ತಂಗರಾಜ್)
ಸರ್ಕಾರದ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು- ಕರ್ನಾಟಕ ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಬೇಕೆಂದು ಕೋರಲಾಗಿದೆ.

1) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು:ಕಾರ್ಯದರ್ಶಿಗಳು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
3) ಆಯುಕ್ತರು, ಹಿಂದುಳಿದ ವರ್ಗಗಳ ಇಲಾಖೆ.
4) ಎಲ್ಲಾ ಇಲಾಖಾ ಮುಖ್ಯಸ್ಥರು
5) ವಿಶೇಷಾಧಿಕಾರಿ, ಸಾಮಾನ್ಯ ಪ್ರವೇಶ ಪರೀಕ್ಷೆ, ಬೆಂಗಳೂರು.
6) ಎಲ್ಲಾ ವಿಭಾಗಾಧಿಕಾರಿಗಳು.
7) ಎಲ್ಲಾ ಜಿಲ್ಲಾಧಿಕಾರಿಗಳು.
8) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9) ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು.
10) ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು.
11) ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
12) ಎಲ್ಲಾ ತಾಲ್ಲೂಕು ತಹಶೀಲ್ದಾರರು.
13) ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು (ತಾಲ್ಲೂಕುಗಳಲ್ಲಿನ)
14) ಎಲ್ಲಾ ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.

ಪ್ರತಿ ಮಾಹಿತಿಗಾಗಿ:

1) ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ.
2) ಉಪ ಕಾರ್ಯದರ್ಶಿ-1 ಮತ್ತು ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ.

//COPY//

(G.V.SEENAPPA)
Assistant Director (G.B)
Backward Classes Department
Bangalore.